ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಪೋಡಿ ಮುಕ್ತ ಗ್ರಾಮಗಳ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

1183 (1345) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪೋಡಿ ಗ್ರಾಮ ಯೋಜನೆಯನ್ನು ಯಾವಾಗ ಜಾರಿಗೆ ತರಲಾಯಿತು ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಗ್ರಾಮಗಳಿವೆ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಇ) ಇದುವರೆವಿಗೆ ಎಷ್ಟು ಗ್ರಾಮಗಳನ್ನು ಪೋಡಿ ಮುಕ್ತ ಮಾಡಲಾಗಿದೆ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಈ) ಎಷ್ಟು ಗ್ರಾಮಗಳನ್ನು ಪೋಡಿ ಮುಕ್ತಗೊಳಿಸಲಾಗಿದೆ ; ಇನ್ನೂ ಪೋಡಿ ಮುಕ್ತಗೊಳ್ಳಬೇಕಾಗಿರುವ ಗ್ರಾಮಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಪೋಡಿ ಮುಕ್ತ ಯೋಜನೆಯನ್ನು ಜಾರಿಗೆ ತರುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಬಂದಿದ್ದಲ್ಲಿ, ವಿಳಂಬ ನಿವಾರಿಸಲು ಕೈಗೊಂಡಿರುವ ಕ್ರಮಗಳೇನು;

(ಋ) ಪೋಡಿ ವಿಲೇವಾರಿ ಸಂಬಂಧ ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳೆಷ್ಟು ;
(ಜಿಲ್ಲಾವಾರು ವಿವರ ನೀಡುವುದು)

(ಎ) ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ವಿಲೇವಾರಿ ಮಾಡಲು ಕೈಗೊಂಡಿರುವ ಕ್ರಮಗಳೇನು ?